D. Pharm (4)

(4)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಎಜುಕೇಷನ್ ಸೊಸೈಟಿ(ರಿ), ಬೀದರ್ ಇವರಿಗೆ ಡಿ.ಫಾರ್ಮ ಕೋರ್ಸ್‌ನ್ನು ಪ್ರಾರಂಭಿಸಲು ಸಂಯೋಜನೆ ನೀಡುವ ಕುರಿತು.

-----

ಓದಲಾಗಿದೆ:

ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಔನಿ:156/ಸಿಬ್ಬಂದಿ-2008-09 ದಿನಾಂಕ: 27-5-2009 ಮತ್ತು 3-7-2009.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ ಔಷಧ ನಿಯಂತ್ರಕರು, ಔಷದ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಕರ್ನಾಟಕ ಎಜುಕೇಷನ್ ಸೊಸೈಟಿ, ಬೀದರ್ ಶಿಕ್ಷಣ ಸಂಸ್ಥೆಗೆ ಇವರು ಡಿ.ಫಾರ್ಮ ಕೋರ್ಸನ್ನು ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ಬಗ್ಗೆ ದಿನಾಂಕ: 2-5-2009 ರಂದು ಪರೀಕ್ಷಾ ಪ್ರಾಧಿಕಾರ ಮಂಡಳಿಯ ಅಧ್ಯಕ್ಷರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಂಟಿಯಾಗಿ ಪರಿವೀಕ್ಷಿಸಿ, ಸದರಿ ಶಿಕ್ಷಣ ಸಂಸ್ಥೆಯು ಡಿ-ಫಾರ್ಮ ಕೋರ್ಸನ್ನು ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಹೊಂದಿದ್ದು 40 ಸೀಟುಗಳ ಪ್ರವೇಶಮಿತಿಯೊಂದಿಗೆ ಡಿ-ಫಾರ್ಮ ಕೋರ್ಸ್‌ನ್ನು ಪ್ರಾರಂಭಿಸಲು ಪರಿವೀಕ್ಷಣಾ ತಂಡವು ವರದಿ ಮಾಡಿರುವುದರಿಂದ, ಅದರಂತೆ ಕರ್ನಾಟಕ ಎಜುಕೇಷನ್ ಸೊಸೈಟಿ, ಬೀದರ್ ಇವರಿಗೆ ಹೊಸದಾಗಿ ಡಿ-ಫಾರ್ಮ ಕೋರ್ಸನ್ನು 2009-10ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿ ನೀಡಬಹುದೆಂದು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದೆ. ಅದರಂತೆ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಆಕುಕ 1 ಪಿಟಿಡಿ 2009 ಬೆಂಗಳೂರು, ದಿನಾಂಕ: 16-10-2009.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಎಜುಕೇಷನ್ ಸೊಸೈಟಿ, ಬೀದರ್ ಇಲ್ಲಿ 2009-10ನೇ ಶೈಕ್ಷಣಿಕ ಸಾಲಿನಿಂದ ಡಿ-ಫಾರ್ಮ ಕೋರ್ಸನ್ನು 60 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡಿ ಸರ್ಕಾರದ ಅನುಮತಿ ನೀಡಲಾಗಿದೆ.

(1) ಸಂಯೋಜನೆಯ ಬಗ್ಗೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ ಅನುಮತಿ ಪಡೆಯತಕ್ಕದ್ದು.

(2) ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.

(3) ಭಾರತ ಫಾರ್ಮಸಿ ಪರಿಷತ್ತು ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

(4) ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.

(5) ಈ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ , ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.

.....2

(6) ಪ್ರಸ್ತಾಪಿತ ಸೀಟುಗಳಲ್ಲಿ ಶೇ. 50 ರಷ್ಟು ಸೀಟುಗಳನ್ನು ಸರ್ಕಾರಿ ಸೀಟುಗಳಾಗಿ ಬಿಟ್ಟು ಕೊಡತಕ್ಕದ್ದು.

(7) ಸರ್ಕಾರದ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದರೂ ಸಹ ಸಂಯೋಜನೆ:ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ನಾ. ಮಹಾಲಕ್ಷ್ಮಮ್ಮ
(ಎನ್.ಮಹಾಲಕ್ಷ್ಮಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ಭಾರತೀಯ ವೈದ್ಯ ಪದ್ಧತಿ)

ಇವರಿಗೆ,

1) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು
2) ಅಧ್ಯಕ್ಷರು, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು-560027
3) ಕಾರ್ಯದರ್ಶಿ, ಕರ್ನಾಟಕ ಎಜುಕೇಷನ್ ಸೊಸೈಟಿ(ರಿ), ಬೀದರ್.
4) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ ಬೆಂಗಳೂರು
5) ಸರ್ಕಾರದ ಪ್ರಧಾನ ಕಾರ್ಯದರ್ಶಿ(ವೈದ್ಯಕೀಯ ಶಿಕ್ಷಣ), ರವರ ಆಪ್ತ ಕಾರ್ಯದರ್ಶಿಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
6) ಸರ್ಕಾರದ ಅಪರ ಕಾರ್ಯದರ್ಶಿ(ವೈದ್ಯಕೀಯ ಶಿಕ್ಷಣ)ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
7) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.